ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಚನ್ನರಾಯ ಪಟ್ಟಣ ಪುರಸಭೆ ಅಭಿವೃದ್ಧಿ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

156 (1155) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆಗಳು ಇಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಬಡಾವಣೆಗಳಲ್ಲಿ ಈ ಸಮಸ್ಯೆಗಳು ಕಂಡು ಬಂದಿವೆ ಮತ್ತು ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಾರ್ಡ್‌ವಾರು ವಿವರ ನೀಡುವುದು)

(ಆ) ಚನ್ನರಾಯಪಟ್ಟಣ ಪುರಸಭೆ ಅಭಿವೃದ್ಧಿಗಾಗಿ ಕಳೆದ 2 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ವಿವರ ನೀಡುವುದು)

(ಇ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ? (ಕಾಮಗಾರಿವಾರು ವಿವರ ನೀಡುವುದು)